ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ ವಿಧಿಸಲಾಗುತ್ತಿರುವ ಅಭಿವೃದ್ಧಿ ಶುಲ್ಕದ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) –

489 (619) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್ಟುಗಳಿಗೆ 1 ಎಚ್.ಪಿ. ಯಿಂದ 10 ಎಚ್.ಪಿ. ತನಕ ವಿದ್ಯುತ್ ಸಂಪರ್ಕ ನೀಡುವಾಗ ವಿಧಿಸುತ್ತಿರುವ ಅಭಿವೃದ್ಧಿ ಶುಲ್ಕವೆಷ್ಟು;

(ಆ) ವಿಧಾನ ಪರಿಷತ್ತಿನ ಅರ್ಜಿ ಸಮಿತಿಯು ಅರ್ಜಿ ಸಂಖ್ಯೆ : 88/2014 ರಲ್ಲಿ ಸಮಿತಿಯು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ನೀಡಲಾದ ಸೂಚನೆಯನ್ನು ಇಲಾಖೆಯಿಂದ ಜಾರಿಗೆ ತರಲಾಗಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಇ) ಅಭಿವೃದ್ಧಿ ಶುಲ್ಕವನ್ನು ಪಾವತಿಸಿಕೊಂಡರೂ ಸಹ ಸಾಮಗ್ರಿಗಳನ್ನು ನೀಡದೇ ವರ್ಷಾನುಗಟ್ಟಲೇ ವಿದ್ಯುತ್ ಸಂಪರ್ಕವನ್ನು ನೀಡದಿರಲು ಕಾರಣವೇನು; ಇದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗಿ ಆರ್ಥಿಕ ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?